ಶನಿವಾರ 23.08.2025 ಬೆಂಗಳೂರು ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 31
Digital Varthe Kannada Daily Volume 01 - Issue 31 Saturday 23.08.2025 Price: 5/- Rs 2 Pages Bangalore

DIGITAL VARTHE

www.digitalvarthe.com

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

## KSRTCಯಿಂದ 1,500 ಹೆಚ್ಚುವರಿ ಬಸ್ ವ್ಯವಸ್ಥೆ

ಬೆಂಗಳೂರು: ಆಗಸ್ಟ್ 26 ಮತ್ತು 27 ರಂದು ಗೌರಿ - ಗಣೇಶ ಹಬ್ಬ ಆಚರಿಸಲು ಜನ ಭಾರಿ ಸಂಖ್ಯೆಯಲ್ಲಿ ಬೆಂಗಳೂರಿನಿಂದ ತಮ್ಮ ಊರುಗಳಿಗೆ ಹೋಗಲು ಸಜ್ಜಾಗಿದ್ದು , ಜನದಟ್ಟಣೆ ತಪ್ಪಿಸಲು ಮತ್ತು ಪ್ರಯಾಣಿಕರ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (KSRTC) ರಾಜ್ಯದಾದ್ಯಂತ ವಿವಿಧ ಸ್ಥಳಗಳಿಗೆ 1,500 ವಿಶೇಷ ಬಸ್‌ಗಳನ್ನು ಓಡಿಸುವುದಾಗಿ ಶುಕ್ರವಾರ ಪ್ರಕಟಿಸಿದೆ. ನಿಯಮಿತ ವೇಳಾಪಟ್ಟಿಗಳ ಜೊತೆಗೆ, ಆಗಸ್ಟ್ 31 ರಂದು ಭಾನುವಾರ ವಿಶೇಷ ಬಸ್ ಗಳನ್ನು ಸಹ ಒದಗಿಸಲಾಗುವುದು ಎಂದು ಕೆಎಸ್‌ಆರ್‌ಟಿಸಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಬೆಂಗಳೂರಿನ ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ತಿರುಪತಿ, ವಿಜಯವಾಡ ಮತ್ತು ಹೈದರಾಬಾದ್ ಮುಂತಾದ ಸ್ಥಳಗಳಿಗೆ ವಿಶೇಷ ಬಸ್‌ಗಳು ತೆರಳುತ್ತವೆ. ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ವಿಶೇಷ ಬಸ್‌ಗಳು ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ ಮತ್ತು ಮಡಿಕೇರಿ ಕಡೆಗೆ ಪ್ರತ್ಯೇಕವಾಗಿ ಕಾರ್ಯನಿರ್ವಹಿಸಲಿವೆ.

ಶಾಂತಿನಗರ(ಟಿಟಿಎಂಸಿ) ಬಿಎಂಟಿಸಿ ಬಸ್ ನಿಲ್ದಾಣದಿಂದ ಮಧುರೈ, ಕುಂಭಕೋಣಂ, ಚೆನ್ನೈ, ಕೊಯಮತ್ತೂರು, ತಿರುಚಿರಾಪಳ್ಳಿ, ಪಾಲಕ್ಕಾಡ್, ತ್ರಿಶೂರ್, ಎರ್ನಾಕುಲಂ, ಕೋಝಿಕ್ಕೋಡ್ ಮತ್ತು ತಮಿಳುನಾಡು ಮತ್ತು ಕೇರಳದ ಇತರ ಸ್ಥಳಗಳಿಗೆ ಪ್ರೀಮಿಯರ್ ವಿಶೇಷ ಬಸ್ ಗಳು ಲಭ್ಯವಿರುತ್ತವೆ.

ಕೆಎಸ್‌ಆರ್‌ಟಿಸಿ ವ್ಯಾಪ್ತಿಯ ತಾಲೂಕು ಮತ್ತು ಜಿಲ್ಲಾ ಬಸ್ ನಿಲ್ದಾಣಗಳಿಂದ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಬಸ್‌ಗಳ ವ್ಯವಸ್ಥೆ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಪ್ರಯಾಣಿಕರು www.ksrtc.karnataka.gov.inನಲ್ಲಿ ಆನ್‌ಲೈನ್ ಮೂಲಕ ತಮ್ಮ ಟಿಕೆಟ್‌ಗಳನ್ನು ಬುಕ್ ಮಾಡಬಹುದು.

## 'ನಾನ್ ಅಡ್ಜಸ್ಟ್‌ಮೆಂಟ್' ರಾಜಕೀಯ ಪಕ್ಷ: ಯತ್ನಾಳ್ ಘೋಷಣೆ

ಬೆಂಗಳೂರು: ಬಿಜೆಪಿಯಿಂದ ಉಚ್ಚಾಟಿತರಾಗಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ನಾನ್ ಅಡ್ಜಸ್ಟ್‌ಮೆಂಟ್ ರಾಜಕೀಯ ಪಕ್ಷ ಸ್ಥಾಪಿಸುವುದಾಗಿ ಶುಕ್ರವಾರ ಘೋಷಿಸಿದ್ದಾರೆ. ರಾಜ್ಯದ ಆರ್ಥಿಕ ಸಂಕಷ್ಟ ಪರಿಸ್ಥಿತಿಯನ್ನು ವಿವರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಿಂದಿನ ಬಿಜೆಪಿ ಸರ್ಕಾರವು 2019-23ರ ಅವಧಿಯಲ್ಲಿ ಹಣವಿಲ್ಲದೆ ಮಸೂದೆಗಳನ್ನು ಅಂಗೀಕರಿಸಿದೆ ಎಂದು ಆರೋಪಿಸಿದ ನಂತರ ಯತ್ನಾಳ್ ಹೊಸ ರಾಜಕೀಯ ಪಕ್ಷ ಸ್ಥಾಪಿಸುವುದಾಗಿ ಹೇಳಿದರು.

ಸಿದ್ದರಾಮಯ್ಯ ಅವರಿಗೆ ನಮ್ಮಿಬ್ಬರ ಬೆಂಬಲ ಸಿಕ್ಕಿದೆ. ನಿಮ್ಮನ್ನೂ ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡರು ಜೆಡಿಎಸ್‌ನಿಂದ ಉಚ್ಚಾಟಿಸಿದ್ದರು. ಹೀಗೆ ಉಚ್ಚಾಟಿಸಲ್ಪಟ್ಟವರು ಮುಂದೊಂದು ದಿನ ಮುಖ್ಯಮಂತ್ರಿಯಾಗುತ್ತಾರೆ ಅಂತಾ ಯತ್ನಾಳ್ ಹೇಳಿದರು. ಇದಕ್ಕೆ ಲಘು ಹಾಸ್ಯದ ದಾಟಿಯಲ್ಲಿ ಪ್ರತಿಕ್ರಿಯಿಸಿದ ಸಿಎಂ, ನೀವೂ ಮುಖ್ಯಮಂತ್ರಿಯಾದ್ರೆ ನನಗೆ ಸಂತೋಷ ಎಂದರು.

ಆದರೆ ಯಾವ ಪಕ್ಷದಿಂದ ಸಿಎಂ ಆಗ್ತೀರಾ? ಎಂದು ಯತ್ನಾಳ್ ಪ್ರಶ್ನಿಸಿದ ಸಿಎಂ ಸಿದ್ದರಾಮಯ್ಯ, ಹೊಸ ಪಕ್ಷ ಕಟ್ಟುವಂತೆ ಸೂಚಿಸಿದರು. ಅದಕ್ಕೆ ಉತ್ತರಿಸಿದ ಯತ್ನಾಳ್, ನಾನ್ ಅಡ್ಜಸ್ಟ್‌ಮೆಂಟ್ ಪಕ್ಷ ಕಟ್ಟುತ್ತೇನೆ. ಅದು ಬಿಜೆಪಿಯ ಮತಗಳನ್ನು ಕಡಿಮೆ ಮಾಡಿದರೆ ಚಿಂತಿಸಬೇಡಿ. ಇದು ನಿಮಗೆ ಸಹಾಯ ಮಾಡುವುದಿಲ್ಲ ಎಂದು ಹೇಳಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬರಬೇಕಾದರೆ ಯತ್ನಾಳ್ ಹೊಸ ಪಕ್ಷ ಆರಂಭಿಸಲಿ ಎಂದು ಸಿದ್ದರಾಮಯ್ಯ ಹೇಳಿದ್ದಾರೆ. ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಮತ್ತು ಅವರ ಪುತ್ರ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ ವೈ ವಿಜಯೇಂದ್ರ ಅವರ ಕುಟುಂಬ ಆಡಳಿತ ಹಾಗೂ ಸಿದ್ದರಾಮಯ್ಯ-ಯಡಿಯೂರಪ್ಪ ಅವರ ಹೊಂದಾಣಿಕೆ ರಾಜಕೀಯ ವಿರುದ್ಧ ವಿರುದ್ಧ ಪದೇ ಪದೇ ಟೀಕೆ ಮಾಡುವ ಮೂಲಕ ಆರು ವರ್ಷಗಳ ಕಾಲ ಬಿಜೆಪಿಯಿಂದ ಯತ್ನಾಳ್ ಉಚ್ಚಾಟಿತರಾಗಿದ್ದಾರೆ.

## 'ಬೂಕರ್' ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಮೈಸೂರು ದಸರಾ ಉದ್ಘಾಟನೆ



### ಹೋರಾಟದ ಹಿನ್ನೆಲೆಯಿಂದ ಬಂದವರು. ರೈತ ಮತ್ತು ಕನ್ನಡ ಚಳವಳಿಯಲ್ಲೂ

ಬೆಂಗಳೂರು: ಪ್ರತಿಷ್ಠಿತ ಬೂಕರ್ ಪ್ರಶಸ್ತಿ ವಿಜೇತರಾದ ಬಾನು ಮುಷ್ತಾಕ್ ಅವರು ಈ ಬಾರಿ ವಿಶ್ವವಿಖ್ಯಾತ ಮೈಸೂರು ದಸರಾವನ್ನು ಉದ್ಘಾಟಿಸಲಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಘೋಷಿಸಿದ್ದಾರೆ.

ಇಂದು ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಬಾನು ಮುಷ್ತಾಕ್ ಅವರ 'ಹೃದಯ ದೀಪ' ಕೃತಿಗೆ ಬೂಕರ್ ಪ್ರಶಸ್ತಿ ಸಿಕ್ಕಿದೆ. ಕರ್ನಾಟಕದ ಮಹಿಳೆಗೆ ಬೂಕರ್ ಸಿಕ್ಕಿದ್ದು ಬಹಳ ಸಂತೋಷವಾಗಿದೆ. ಹೋರಾಟದ ಹಿನ್ನೆಲೆಯಿಂದ ಬಂದವರು ಬಾನು ಮುಷ್ತಾಕ್. ರೈತ ಮತ್ತು ಕನ್ನಡ ಚಳವಳಿಯಲ್ಲೂ ಕೆಲಸ ಮಾಡಿದ್ದಾರೆ. ಹೀಗಾಗಿ ಅವರನ್ನು ದಸರಾ ಮಹೋತ್ಸವದ ಉದ್ಘಾಟನೆಗೆ ಆಹ್ವಾನಿಸಿದ್ದೇವೆ ಎಂದರು.

ಈ ಬಾರಿ ಮೈಸೂರು ದಸರಾ ಸೆಪ್ಟೆಂಬರ್ 22ರಿಂದ ಅಕ್ಟೋಬರ್ 2ರವರೆಗೆ 11 ದಿನಗಳ ಕಾಲ ನಡೆಯಲಿದ್ದು , ಉದ್ಘಾಟನೆಗೆ ಮೈಸೂರು ಜಿಲ್ಲಾಡಳಿತವು, ಕನ್ನಡದ ಲೇಖಕಿ ಬಾನು ಮುಷ್ತಾಕ್ ಅವರನ್ನು ಗೌರವದಿಂದ ಅಧಿಕೃತವಾಗಿ ಆಹ್ವಾನಿಸಲಿದೆ ಎಂದು ಸಿಎಂ ತಿಳಿಸಿದರು. ಇನ್ನು ದಸರಾದಲ್ಲಿ ಏರ್ ಶೋಗೆ ಅನುಮತಿ ಸಿಕ್ಕಿದೆ. ಇದಕ್ಕಾಗಿ ನಾನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಗೆ ಪತ್ರ ಬರೆದಿದ್ದೆ. ಅವರಿಗೂ ದಸರಾಗೆ ಆಹ್ವಾನಿಸಿದ್ದೇನೆ ಎಂದು ಸಿಎಂ ಹೇಳಿದರು.

## ಹೆಚ್ಚುವರಿ ನೀರು ಸಂಗ್ರಹಿಸಲು ಮೇಕೆದಾಟು ಅಗತ್ಯ: ಸಿಎಂ

### ನಿಗದಿ ಮಾಡಿದ್ದಕ್ಕಿಂತ ಹೆಚ್ಚಿನ ನೀರನ್ನು ಬಿಡುಗಡೆ ಮಾಡುತ್ತಿದೆ.

ಬೆಂಗಳೂರು: ರಾಜ್ಯದ ಕಾವೇರಿ ಜಲಾನಯನ ಪ್ರದೇಶದಲ್ಲಿ ಕಳೆದ ಮೂರು ತಿಂಗಳುಗಳಿಂದ ಭರ್ಜರಿ ಮಳೆಯಾಗುತ್ತಿರುವುದರಿಂದ ತಮಿಳುನಾಡಿಗೆ ಅಗತ್ಯಕ್ಕಿಂತಲೂ ಹೆಚ್ಚಿನ ಕಾವೇರಿ ನೀರು ಹರಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಹೇಳಿದ್ದಾರೆ.

ಕರ್ನಾಟಕವು ನೆರೆಯ ರಾಜ್ಯಕ್ಕೆ ನಿಗದಿ ಮಾಡಿದ್ದಕ್ಕಿಂತ ಹೆಚ್ಚಿನ ನೀರನ್ನು ಬಿಡುಗಡೆ ಮಾಡುತ್ತಿದೆ. ಹೆಚ್ಚವರಿ ನೀರು ಸಂಗ್ರಹಿಸಲು ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟುವಿನಲ್ಲಿ ಸಮತೋಲನ ಜಲಾಶಯ ನಿರ್ಮಾಣ ಮಾಡುವ ಅಗತ್ಯ ಇದೆ ಎಂದು ಸಿದ್ದರಾಮಯ್ಯ ಅವರು ಇಂದು ವಿಧಾನಸಭೆಗೆ ತಿಳಿಸಿದರು.



"ಸಾಮಾನ್ಯ ಮಳೆಯ ಸಮಯದಲ್ಲಿ ನಾವು ತಮಿಳುನಾಡಿಗೆ 177.25 ಟಿಎಂಸಿ ನೀರು ಬಿಡುಗಡೆ ಮಾಡಬೇಕಾಗಿದೆ. ಆದರೆ ನಾವು ನಿಗದಿಗಿಂತ ಹೆಚ್ಚಿನ ನೀರನ್ನು ಈಗಾಗಲೇ ಬಿಡುಗಡೆ ಮಾಡಿದ್ದೇವೆ. ಅದಕ್ಕಾಗಿಯೇ ನಾವು ಮೇಕೆದಾಟುನಲ್ಲಿ ಸಮತೋಲನ ಜಲಾಶಯ ನಿರ್ಮಾಣಕ್ಕೆ ಒತ್ತಾಯಿಸುತ್ತಿದ್ದೇವೆ" ಎಂದು ಸಿದ್ದರಾಮಯ್ಯ ಮುಂಗಾರು ಅಧಿವೇಶನದ ಕೊನೆಯ ದಿನವಾದ ಇಂದು ವಿಧಾನಸಭೆಗೆ ತಿಳಿಸಿದರು. "ತಮಿಳುನಾಡು ಇದನ್ನು ಏಕೆ ವಿರೋಧಿಸುತ್ತಿದೆ ಎಂದು ನನಗೆ ಅರ್ಥವಾಗುತ್ತಿಲ್ಲ. ಅವರು ಕೇವಲ 177.25 ಟಿಎಂಸಿ ನೀರಿಗೆ ಮಾತ್ರ ಅರ್ಹರು. ಸುಪ್ರೀಂ ಕೋರ್ಟ್ ಕೂಡ ಅದನ್ನೇ ಹೇಳಿದೆ. ನಾವು ಮೇಕೆದಾಟು ಜಲಾಶಯ ನಿರ್ಮಿಸಿದರೆ, 67 ಟಿಎಂಸಿ ನೀರನ್ನು ಹಿಡಿದಿಟ್ಟುಕೊಳ್ಳಬಹುದು. ಇದು ನಮಗೆ ಕುಡಿಯುವ ನೀರಿಗೆ ಸಹಾಯ ಮಾಡುತ್ತದೆ ಮತ್ತು ಬರಗಾಲದ ಸಮಯದಲ್ಲಿಯೂ ಸಹ ಅದನ್ನು ಬಿಡುಗಡೆ ಮಾಡಬಹುದು" ಎಂದು ಮುಖ್ಯಮಂತ್ರಿಗಳು ಹೇಳಿದರು.

ಸಮತೋಲನ ಜಲಾಶಯವನ್ನು ನಿರ್ಮಿಸಿದರೆ ಯಾವುದೇ ಹಾನಿ ಇಲ್ಲ ಎಂದು ಹೇಳಿದ ಅವರು, ಅದನ್ನು ವಿರೋಧಿಸಬೇಡಿ ಎಂದು ತಮಿಳುನಾಡು ಮುಖ್ಯಮಂತ್ರಿಗೆ ವಿನಂತಿಸಿದರು.

ಈ ವರ್ಷ ಉತ್ತಮ ಮಳೆಯಾಗುತ್ತಿರುವುದರಿಂದ, ಜಲಾಶಯಗಳು ತುಂಬಿವೆ ಮತ್ತು ರಾಜ್ಯವು ಕಾವೇರಿ, ತುಂಗಭದ್ರಾ, ಮತ್ತು ಕೃಷ್ಣಾ ನದಿಗಳ ಜಲಾಶಯಗಳಿಂದ ಹೆಚ್ಚಿನ ನೀರನ್ನು ಬಿಡುಗಡೆ ಮಾಡುತ್ತಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ತಮಿಳುನಾಡು ಯಾವಾಗಲೂ ಮೇಕೆದಾಟು ಜಲಾಶಯವನ್ನು ವಿರೋಧಿಸುತ್ತಿತ್ತು, ಇದು ತನ್ನ ಜನರಿಗೆ, ವಿಶೇಷವಾಗಿ ರೈತ ಸಮುದಾಯಕ್ಕೆ ಅನ್ಯಾಯವಾಗುತ್ತದೆ ಎಂದು ಹೇಳಿತು.

## ಸೋನಿಯಾ ಗಾಂಧಿ, ಸ್ಟಾಲಿನ್ ಯೋಜನೆಗಳು ಕೈಗೂಡಲ್ಲ; ಅಮಿತ್ ಶಾ!

### ಸ್ಟಾಲಿನ್ ಭ್ರಷ್ಟ ಕೆಲಸ ಮಾಡಿ ಈ ರಾಜ್ಯದ ಮುಖ್ಯಮಂತ್ರಿ ಆಗಿದ್ದಾರೆ

ತಿರುನೆಲ್ವೇಲಿ: 130ನೇ ಸಾಂವಿಧಾನಿಕ ತಿದ್ದುಪಡಿ ಮಸೂದೆಯನ್ನು 'ಕಪ್ಪು ಮಸೂದೆ' ಎಂದು ಕರೆಯುವ ಯಾವುದೇ ಹಕ್ಕು ಮುಖ್ಯಮಂತ್ರಿ ಎಂ ಕೆ ಸ್ಟಾಲಿನ್‌ಗೆ ಇಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಶುಕ್ರವಾರ ಹೇಳಿದ್ದಾರೆ. ಪಕ್ಷದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಶಾ, ಡಿಎಂಕೆಯು ದೇಶದಲ್ಲಿ "ಅತ್ಯಂತ ಭ್ರಷ್ಟ" ಸರ್ಕಾರವಾಗಿದೆ. ತಮಿಳು ಸಾಹಿತ್ಯದ ಶ್ರೇಷ್ಠ ಕೃತಿ 'ತಿರುಕ್ಕುರಲ್' ನಂತೆ ಸಮರ್ಥ, ದಕ್ಷ ಸರ್ಕಾರವನ್ನು ನಡೆಸಿದ್ದು ಪ್ರಧಾನಿ ನರೇಂದ್ರ ಮೋದಿ ಎಂದು ಹೇಳಿದರು.

130ನೇ ಸಾಂವಿಧಾನಿಕ ತಿದ್ದುಪಡಿ ಮಸೂದೆಯನ್ನು ಕಪ್ಪು ಮಸೂದೆ ಎಂದು ತಿರಸ್ಕರಿಸುವ ಹಕ್ಕು ಸ್ಟಾಲಿನ್‌ಗೆ ಇಲ್ಲ. ಏಕೆಂದರೆ ಅವರು ಭ್ರಷ್ಟ ಕೆಲಸ ಮಾಡಿದ ಸಿಎಂ ಆಗಿದ್ದಾರೆ ಎಂದು ಆರೋಪಿಸಿದ ಅಮಿತ್ ಶಾ, ಸ್ಟಾಲಿನ್ ಆಡಳಿತಾವಧಿಯಲ್ಲಿನ ಅನೇಕ ಹಗರಣಗಳನ್ನು ಪ್ರಸ್ತಾಪಿಸಿದರು.

ರಾಜ್ಯ ಮದ್ಯದ ನಿಗಮ TASMAC, ಮರಳು ಗಣಿಗಾರಿಕೆ, ಮೂಲಸೌಕರ್ಯ, ಸಾರಿಗೆ ಇಲಾಖೆ, ಪೌಷ್ಟಿಕಾಂಶ ಕಿಟ್, ಉಚಿತ ಧೋತಿ, ಉದ್ಯೋಗಕ್ಕಾಗಿ ಹಣ, ಪಡಿತರ ಕಳ್ಳಸಾಗಣೆ ಮತ್ತು MGNREGAದಲ್ಲಿ ಬಡ ತಮಿಳರ ಹಣವನ್ನು ಲೂಟಿ ಮಾಡಲಾಗಿದೆ ಎಂದು ಆರೋಪಿಸಿದರು.

ಡಿಎಂಕೆ ನಾಯಕ ಮತ್ತು ಮಾಜಿ ಸಚಿವ ಕೆ ಪೊನ್ಮುಡಿ ವಿರುದ್ಧದ ಪ್ರಕರಣ ಮತ್ತು ವಿ ಸೆಂಥಿಲ್ ಬಾಲಾಜಿ ಅವರ ಇತ್ತೀಚಿನ ಪ್ರಕರಣವನ್ನು ಉಲ್ಲೇಖಿಸಿದ ಶಾ, ಜೈಲು ಪಾಲಾಗಿದ್ದರೂ ಕ್ಯಾಬಿನೆಟ್‌ನ ಭಾಗವಾಗಿ ಮತ್ತು ಆಡಳಿತ ನಡೆಸುವುದು ಸೂಕ್ತವೇ ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, ರಾಹುಲ್ ಗಾಂಧಿಯನ್ನು ಪ್ರಧಾನಿ ಮಾಡುವುದೇ ಅವರ ಏಕೈಕ ಅಜೆಂಡ ಆಗಿದೆ. ಅದೇ ರೀತಿ ಸ್ಟಾಲಿನ್ ಅವರ ಏಕೈಕ ಅಜೆಂಡಾ ಅವರ ಪುತ್ರ ಉದಯನಿಧಿಯನ್ನು ಮುಖ್ಯಮಂತ್ರಿ ಮಾಡುವುದಾಗಿದೆ. ಎನ್‌ಡಿಎ ವಿಜಯಶಾಲಿಯಾಗುವುದರಿಂದ ಇವೆರಡೂ ಫಲ ನೀಡುವುದಿಲ್ಲ ಎಂದು ಶಾ ಪ್ರತಿಪಾದಿಸಿದರು.

ಡಿಎಂಕೆ ದೇಶದಲ್ಲೇ ಅತ್ಯಂತ ಭ್ರಷ್ಟ ಸರ್ಕಾರವಾಗಿದ್ದು , ತಮಿಳುನಾಡಿನಲ್ಲಿ 2026 ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ, ಎಐಎಡಿಎಂಕೆ ಮತ್ತು ಎನ್‌ಡಿಎ ಮೈತ್ರಿಕೂಟ ಗೆದ್ದು ಸರ್ಕಾರ ರಚಿಸಲಿದೆ ಎಂದು ಅಮಿತ್ ಶಾ ವಿಶ್ವಾಸ ವ್ಯಕ್ತಪಡಿಸಿದರು.

## ವಿಧಾನಸಭೆ ಮುಂಗಾರು ಅಧಿವೇಶನಕ್ಕೆ ತೆರೆ: ಒಟ್ಟು 39 ಮಸೂದೆ ಅಂಗೀಕಾರ



### ಇತಿಹಾಸದಲ್ಲೇ ಅತಿ ಹೆಚ್ಚು ಅಂದರೆ 39 ವಿಧೇಯಕಗಳ ಅಂಗೀಕಾರ

ಬೆಂಗಳೂರು: ಎರಡು ವಾರಗಳ ಕಾಲ ನಡೆದ ವಿಧಾನಸಭೆಯ ಮುಂಗಾರು ಅಧಿವೇಶನಕ್ಕೆ ಶುಕ್ರವಾರ ಅಧಿಕೃತವಾಗಿ ತೆರೆ ಬಿದಿದ್ದು , ಪ್ರತಿಪಕ್ಷಗಳ ವಿರೋಧದ ನಡವೆಯೇ ಒಟ್ಟು 39 ಮಸೂದೆಗಳನ್ನು ಅಂಗೀಕರಿಸಲಾಗಿದೆ. ಈ ಬಗ್ಗೆ ಅಧಿವೇಶನದ ಸಮಾರೋಪದ ವೇಳೆ ಮಾಹಿತಿ ನೀಡಿರುವ ವಿಧಾನಸಭೆಯ ಸ್ಪೀಕರ್ ಯು ಟಿ ಖಾದರ್ ಅವರು, ಕಳೆದ 9 ದಿನಗಳಲ್ಲಿ ಒಟ್ಟು 70 ಗಂಟೆಗಳ ಕಾಲ ಅಧಿವೇಶನ ನಡೆಸಲಾಗಿದೆ ಎಂದು ಹೇಳಿದ್ದಾರೆ.

ಈ ಬಾರಿಯ ಮುಂಗಾರು ಅಧಿವೇಶನದಲ್ಲಿ ಅತಿ ಹೆಚ್ಚು ಅಂದರೆ 39 ವಿಧೇಯಕಗಳನ್ನು ಆಡಳಿತ ಪಕ್ಷ ಮಂಡನೆ ಮಾಡಿ ಅದಕ್ಕೆ ಅನುಮೋದನೆ ಪಡೆದಿದ್ದು , ಒಂದು ಇತಿಹಾಸ ಸೃಷ್ಟಿಯಾಗಿದೆ. ಇತಿಹಾಸದಲ್ಲೇ ಮೊದಲ ಬಾರಿಗೆ ಅತಿ ಹೆಚ್ಚು ಮಸೂದೆಗಳ ಮಂಡನೆ ಮಾಡಿ, ಅನುಮೋದನೆ ನೀಡಲಾಗಿದೆ. ಇದಕ್ಕೆ ಸಹಕರಿಸಿದ ಎಲ್ಲ ಆಡಳಿತ ಮತ್ತು ವಿಪಕ್ಷಗಳ ಶಾಸಕರಿಗೆ ಧನ್ಯವಾದ ಸಲ್ಲಿಸುತ್ತೇನೆ ಎಂದು ಸ್ಪೀಕರ್ ತಿಳಿಸಿದ್ದಾರೆ.

ಈ ಮೊದಲು ಅಧಿವೇಶನಗಳಲ್ಲಿ ಸುಮಾರು 20 ವಿಧೇಯಕಗಳ ಮಂಡನೆಯಾಗುತ್ತಿದ್ದವು. ಆದರೆ ಈ ಬಾರಿಯ ಅಧಿವೇಶನದಲ್ಲಿ ಅದಕ್ಕೂ ಎರಡು ಪಟ್ಟು ವಿಧೇಯಕಗಳ ಮಂಡನೆ ಮಾಡಿ ಅವುಗಳಿಗೆ ಅನುಮೋದನೆ ಪಡೆದದ್ದು ದಾಖಲೆಯಾಗಿದೆ. ಮುಂಗಾರು ಅಧಿವೇಶನದಲ್ಲಿ ಒಟ್ಟು 2,306 ಪ್ರಶ್ನೆಗಳು ಸ್ವೀಕೃತವಾಗಿದ್ದು , ಈ ಪೈಕಿ 2,199 ಪ್ರಶ್ನೆಗಳನ್ನು ಅಂಗೀಕರಿಸಲಾಗಿತ್ತು.

## ಐದು ಗ್ಯಾರಂಟಿಗಳಿಂದ ತಲಾ ಆದಾಯದಲ್ಲಿ ಕರ್ನಾಟಕ ನಂಬರ್ ಒನ್




ಬೆಂಗಳೂರು: ಕಾಂಗ್ರೆಸ್ ಪಕ್ಷದ ಐದು ಚುನಾವಣಾ ಪೂರ್ವ ಭರವಸೆಗಳಿಂದಾಗಿ ತಲಾ ಆದಾಯದಲ್ಲಿ ಕರ್ನಾಟಕ ದೇಶದಲ್ಲಿಯೇ ಅಗ್ರಸ್ಥಾನದಲ್ಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಹೇಳಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ, ಐದು ಗ್ಯಾರಂಟಿಗಳಿಗಾಗಿ ಸರ್ಕಾರ 96,000 ಕೋಟಿ ರೂ.ಗಳನ್ನು ಖರ್ಚು ಮಾಡಿದೆ ಎಂದು ಸಿಎಂ ತಿಳಿಸಿದರು.

ನಮ್ಮ ಐದು ಗ್ಯಾರಂಟಿಗಳಿಗಾಗಿ ನಾವು ಪ್ರತಿ ವರ್ಷ 52,000 ಕೋಟಿ ರೂ.ಯಿಂದ 55,000 ಕೋಟಿ ರೂ.ಗಳವರೆಗೆ ಖರ್ಚು ಮಾಡಿದ್ದೇವೆ. ಜುಲೈ ಅಂತ್ಯದವರೆಗೆ, ಒಟ್ಟು 96,000 ಕೋಟಿ ರೂ.ಗಳನ್ನು ಗ್ಯಾರಂಟಿಗಳಿಗಾಗಿ ಖರ್ಚು ಮಾಡಿದ್ದೇವೆ(ಮೇ 20, 2023 ರಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ) ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು. ಹಣ ಇಲ್ಲದಿದ್ದರೆ ಸರ್ಕಾರವು ಇಷ್ಟೊಂದು ಹಣವನ್ನು ಖರ್ಚು ಮಾಡಲು ಹೇಗೆ ಸಾಧ್ಯ? ಎಂದು ವಿಧಾನಸಭೆಯಲ್ಲಿ ನಡೆದ ಚರ್ಚೆಯ ವೇಳೆ ಪ್ರತಿಪಕ್ಷಗಳನ್ನು ಪ್ರಶ್ನಿಸಿದರು.

'ಶಕ್ತಿ' ಯೋಜನೆಯಡಿಯಲ್ಲಿ ಕರ್ನಾಟಕದ ಮಹಿಳೆಯರು 500 ಕೋಟಿಗೂ ಹೆಚ್ಚು ಪ್ರಯಾಣ ಮಾಡಿದ್ದಾರೆ ಎಂದು ಅವರು ಹೇಳಿದರು. 'ರಾಜ್ಯದಲ್ಲಿ ಗ್ಯಾರಂಟಿಗಳಿಂದಾಗಿ ಏನಾಯಿತು ಎಂಬುದು ನಿಮಗೆ ಗೊತ್ತಿದಿದೆಯೇ? ನಾವು ದೇಶದಲ್ಲಿ ತಲಾ ಆದಾಯದಲ್ಲಿ ನಂಬರ್ ಒನ್ ಆಗಿದ್ದೇವೆ. 2013-14ರಲ್ಲಿ, ತಲಾ ಆದಾಯ 1,01,000 ರೂ.ಗಳಷ್ಟಿತ್ತು. ಆದರೆ ಇಂದು ಅದು 2,04,000 ರೂ.ಗಳಷ್ಟಿದೆ.

ಅಭಿವೃದ್ಧಿ ಇಲ್ಲದೆ ಇದು ಸಾಧ್ಯವೇ? ರಾಜ್ಯದಲ್ಲಿ ಅಭಿವೃದ್ಧಿ ಸ್ಥಗಿತಗೊಂಡಿದೆ ಎಂದು ಆರೋಪಿಸುತ್ತಿರುವ ಪ್ರತಿಪಕ್ಷ ಬಿಜೆಪಿಯನ್ನು ಸಿಎಂ ಸಿದ್ದರಾಮಯ್ಯ ಪ್ರಶ್ನಿಸಿದರು. ಶಕ್ತಿ ಯೋಜನೆ ಜಾರಿಗೆ ತಂದ ನಂತರ ಬೆಂಗಳೂರಿನಲ್ಲಿ ಮಹಿಳೆಯರ ಉದ್ಯೋಗ ದರ ಶೇ. 23 ರಷ್ಟು ಮತ್ತು ಹುಬ್ಬಳ್ಳಿ-ಧಾರವಾಡದಲ್ಲಿ ಶೇ. 21 ರಷ್ಟು ಹೆಚ್ಚಾಗಿದೆ. ಇದನ್ನು ಹೇಳುತ್ತಿರುವುದು ನಾನಲ್ಲ, ಮಾಧ್ಯಮಗಳು ಹೇಳುತ್ತಿವೆ ಎಂದು ಸಿದ್ದರಾಮಯ್ಯ ತಿಳಿಸಿದರು.

"ಕರ್ನಾಟಕವು ತಲಾ ಆದಾಯದಲ್ಲಿ ಪ್ರಥಮ ಸ್ಥಾನದಲ್ಲಿರಲು ಕಾರಣವೇನು? ಏಕೆಂದರೆ, ಈ ಗ್ಯಾರಂಟಿಗಳು ಜನರ ಖರೀದಿ ಶಕ್ತಿಯನ್ನು ಹೆಚ್ಚಿಸಿವೆ. ಜನರು ಪ್ರತಿ ತಿಂಗಳು 4,000 ರಿಂದ 5,000 ರೂ. ಪಡೆಯುತ್ತಿದ್ದಾರೆ. ವಾರ್ಷಿಕವಾಗಿ, 50,000 ರಿಂದ 60,000 ರೂ. ಪಡೆಯುತ್ತಿದ್ದಾರೆ. ಇದು ಅಭಿವೃದ್ಧಿಯಲ್ಲವೇ?" ಎಂದು ಅವರು ಪ್ರಶ್ನಿಸಿದರು.

ಇದೇ ವೇಳೆ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಅನುದಾನ ಕಡಿತಗೊಳಿಸಿರುವುದನ್ನು ಎತ್ತಿ ತೋರಿಸಿದ ಸಿಎಂ, 14ನೇ ಹಣಕಾಸು ಆಯೋಗದ ಅಡಿಯಲ್ಲಿ ರಾಜ್ಯಕ್ಕೆ ಶೇ. 4.7 ರಷ್ಟು ಅನುದಾನ ಸಿಕ್ಕಿದೆ. ಆದರೆ 15ನೇ ಹಣಕಾಸು ಆಯೋಗದಲ್ಲಿ ಅದು ಶೇ. 3.6 ಕ್ಕೆ ಇಳಿದಿದೆ, ಶೇ. 1 ರಷ್ಟು ಕಡಿತದಿಂದ 68,000 ಕೋಟಿ ನಷ್ಟವಾಗಿದೆ ಎಂದು ಹೇಳಿದರು.

ರಾಜ್ಯವು 68,000 ಕೋಟಿ ರೂ. ಪಡೆದಿದ್ದರೆ, ಮತ್ತಷ್ಟು ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬಹುದಿತ್ತು. ಇದಲ್ಲದೆ, ಭದ್ರಾ ಮೇಲ್ದಂಡೆ ನೀರಿನ ಯೋಜನೆಯಡಿಯಲ್ಲಿ, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು 2023-24 ರ ಕೇಂದ್ರ ಬಜೆಟ್‌ನಲ್ಲಿ ಘೋಷಿಸಿದಂತೆ ರಾಜ್ಯಕ್ಕೆ 5,300 ಕೋಟಿ ರೂ.ಗಳನ್ನು ಪಡೆಯಬೇಕಿತ್ತು. ಆದರೆ ಅದು ನಮಗೆ ಸಿಗಲಿಲ್ಲ ಎಂದು ಸಿಎಂ ತಿಳಿಸಿದರು.

ಕೇಂದ್ರದ ಹಣ ನಮಗೆ ಸಿಕ್ಕಿದ್ದರೆ, ನೀವು ಕೇಳಿದಷ್ಟು ಹಣವನ್ನು ನಿಮ್ಮ ಕ್ಷೇತ್ರಗಳಿಗೆ ಹಂಚಿಕೆ ಮಾಡಲು ಸಾಧ್ಯವಾಗುತ್ತಿತ್ತು ಎಂದು ಮುಖ್ಯಮಂತ್ರಿಗಳು ಸದನಕ್ಕೆ ತಿಳಿಸಿದರು.

ಅವರ ಪ್ರಕಾರ, ಕೇಂದ್ರ ಅನುದಾನದ ಕೊರತೆ ಮತ್ತು ತೆರಿಗೆ ಹಂಚಿಕೆಯಲ್ಲಿ ಕಡಿತದ ಹೊರತಾಗಿಯೂ, ರಾಜ್ಯವು ಈ ಹಣಕಾಸು ವರ್ಷದಲ್ಲಿ ಸುಮಾರು 4,09,000 ಕೋಟಿ ರೂ.ಗಳ ಬಜೆಟ್ ಮಂಡಿಸಿತು.

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

# ದಳಪತಿ ವಿಜಯ್ ಸಿಎಂ ಅಭ್ಯರ್ಥಿ; TVK ಘೋಷಣೆ



## ಪಕ್ಷದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ವಿಶೇಷ ನಿರ್ಣಯ

ಚೆನ್ನೈ: ತಮಿಳುನಾಡು ವಿಧಾನಸಭಾ ಚುನಾವಣೆಗೆ ಇನ್ನೂ ಒಂದು ವರ್ಷ ಬಾಕಿಯಿರುವಂತೆಯೇ ರಾಜಕೀಯ ಪಕ್ಷಗಳಲ್ಲಿ ಚಟುವಟಿಕೆಗಳು ಗರಿಗೆದರಿದ್ದು, ಈಗಾಗಲೇ ತಯಾರಿ ಆರಂಭಿಸಿವೆ. ಆಡಳಿತಾರೂಢ ಡಿಎಂಕೆ ಮುಂದಿನ ಚುನಾವಣೆಯಲ್ಲೂ ಗೆದ್ದು ಅಧಿಕಾರಕ್ಕೆ ಬರಲು ಕಸರತ್ತು ಆರಂಭಿಸಿದೆ.

ಮುಖ್ಯಮಂತ್ರಿ ಎಂಕೆ ಸ್ಟಾಲಿನ್, ಪಕ್ಷದ ಸದಸ್ಯತ್ವ ನೋಂದಣಿ ಚಾಲನೆ ನೀಡಿದ್ದು, ಮನೆಗೆ ಮನೆಗೆ ತೆರಳಿ ನೋಂದಣಿ ಆರಂಭಿಸಲಾಗಿದೆ. ಪಕ್ಷದ ಸಾಧನೆಗಳನ್ನು ಜನರಿಗೆ ಮನವರಿಕೆ ಮಾಡಿಕೊಡುವ ಮೂಲಕ ಸುಮಾರು 2 ಕೋಟಿ ಸದಸ್ಯತ್ವ ನೋಂದಣಿ ಮಾಡಿಕೊಳ್ಳುವ ಗುರಿ ಹೊಂದಲಾಗಿದೆ.

ಮತ್ತೊಂದೆಡೆ ಪ್ರತಿಪಕ್ಷ ಎಐಎಡಿಎಂಕೆ ಬಿಜೆಪಿ ಮೈತ್ರಿಕೂಟ ಕೂಡಾ ಈ ಬಾರಿ ಶತಯಗತಾಯ ಅಧಿಕಾರ ಹಿಡಿಯುವ ಶಪಥ ನೀಡಿದ್ದು, ಒಗ್ಗಟ್ಟಾಗಿ ಚುನಾವಣೆ ನಡೆಸಲು ತಯಾರಿ ನಡೆಸುತ್ತಿವೆ.

**ಟಿವಿಕೆ ಪಕ್ಷದ ಕಾರ್ಯಕಾರಿ ಸಮಿತಿ ಸಭೆ:** ಈ ಮಧ್ಯೆ ಒಂದು ಹೆಜ್ಜೆ ಮುಂದೆ ಹೋಗಿರುವ ತಮಿಳಗ ವೆಟ್ರಿ ಕಳಗಂ ಸಿಎಂ ಅಭ್ಯರ್ಥಿಯನ್ನು ಘೋಷಿಸಿದೆ. ಪಕ್ಷದ ಸಂಸ್ಥಾಪಕ ದಳಪತಿ ವಿಜಯ್ ಮುಖ್ಯಮಂತ್ರಿ ಅಭ್ಯರ್ಥಿ ಎಂದು ಶುಕ್ರವಾರ ಘೋಷಿಸಿದೆ. ಈ ಸಂಬಂಧ ನಡೆದ ಪಕ್ಷದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ವಿಶೇಷ ನಿರ್ಣಯವೊಂದನ್ನು ಅಂಗೀಕರಿಸಲಾಗಿದೆ. ಅಲ್ಲದೇ ಮುಂದಿನ ತಿಂಗಳು ಬೃಹತ್ ಸಮಾವೇಶ ಆಯೋಜಿಸಲು ಪ್ರಸ್ತಾಪಿಸಲಾಗಿದೆ. ಪಕ್ಷದ ಸಿದ್ಧಾಂತವನ್ನು ಜನರಿಗೆ ತಲುಪಿಸಲು ಹಳ್ಳಿಗಳಲ್ಲಿ ಸಾರ್ವಜನಿಕ ಸಭೆ ಆಯೋಜಿಸಲು ಪಕ್ಷ ನಿರ್ಧರಿಸಿದೆ.

**ಡಿಎಂಕೆ ಅಥವಾ ಬಿಜೆಪಿ ಜೊತೆ ಮೈತ್ರಿಯಿಲ್ಲ:** ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಡಿಎಂಕೆ ಅಥವಾ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳುವುದಿಲ್ಲ. ಬಿಜೆಪಿ ತಮಿಳುನಾಡಿನಲ್ಲಿ ಬೆಳೆಯಲು ಸಾಧ್ಯವಿಲ್ಲ ಎಂದು ವಿಜಯ್ ಹೇಳಿದ್ದಾರೆ. ರಾಜಕೀಯ ಲಾಭಕ್ಕಾಗಿ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳಲು ನಾವು ಡಿಎಂಕೆ ಅಥವಾ ಎಐಎಡಿಎಂಕೆ ರೀತಿಯ ಪಕ್ಷ ಅಲ್ಲ. ನಾವು ಟಿವಿಕೆ ಎಂದು ವಿಜಯ್ ಹೇಳಿದ್ದು, ಆ ಎರಡೂ ಪಕ್ಷಗಳಲ್ಲಿ ಇಲ್ಲದ ಪಕ್ಷಗಳೊಂದಿಗೆ ಮೈತ್ರಿ ಮಾಡಿಕೊಳ್ಳಲು ನಿರ್ಣಯದಲ್ಲಿ ಒಪ್ಪಿಗೆ ನೀಡಲಾಗಿದೆ.

**ಕೋಮು ಆಧಾರಿತವಾಗಿ ಜನರ ವಿಭಜನೆ:** ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ವಿಜಯ್, ಕೆಟ್ಟ ರಾಜಕೀಯಕ್ಕಾಗಿ ಕೋಮು ಆಧಾರಿತವಾಗಿ ಜನರನ್ನು ವಿಭಜಿಸಲು ಕೇಂದ್ರ ಸರ್ಕಾರ ಪ್ರಯತ್ನಿಸುತ್ತಿದೆ. ಅವರು ತಮಿಳುನಾಡು ಮಾತ್ರವಲ್ಲದೇ ದೇಶಾದ್ಯಂತ ಇಂತಹ ಹೀನಕೃತ್ಯಗಳಲ್ಲಿ ತೊಡಗಿದ್ದಾರೆ ಎಂದು ಆರೋಪಿಸಿದರು.

2024 ಫೆಬ್ರವರಿಯಲ್ಲಿ ಸೂಪರ್ ಸ್ಟಾರ್ ದಳಪತಿ ವಿಜಯ್ TVK ಪಕ್ಷವನ್ನು ಸ್ಥಾಪಿಸಿದರು. ಆದರೂ 2024ರ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿರಲಿಲ್ಲ. ಇದೀಗ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಭಾರಿ ತಯಾರಿ ನಡೆಸುತ್ತಿದೆ.

# ಕಾಂಗ್ರೆಸ್ ಶಾಸಕ ವೀರೇಂದ್ರ ಪಪ್ಪಿ ಸಿಕ್ಕಿಂನಲ್ಲಿ ED ವಶಕ್ಕೆ!

ಅಕ್ರಮ ಹಣ ವರ್ಗಾವಣೆ, ಅಕ್ರಮ ಆಸ್ತಿ ಗಳಿಕೆ ಆರೋಪಕ್ಕೆ ಸಂಬಂಧಿಸಿದಂತೆ ಚಿತ್ರದುರ್ಗದ ಕಾಂಗ್ರೆಸ್ ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ನಿವಾಸದ ಮೇಲೆ ಜಾರಿ ನಿರ್ದೇಶನಾಲಯ (ED) ಅಧಿಕಾರಿಗಳು ಬೆಳ್ಳಂ ಬೆಳಿಗ್ಗೆ ದಾಳಿ ನಡೆಸಿ, ಶೋಧ ಕಾರ್ಯಾಚರಣೆ ನಡೆಸಿದೆ. ಇದರ ಬೆನ್ನಲ್ಲೇ ಸಿಕ್ಕಿಂನಲ್ಲಿ ಕಾಂಗ್ರೆಸ್ ಶಾಸಕ ವೀರೇಂದ್ರ ಪಪ್ಪಿಯನ್ನು ವಶಕ್ಕೆ ಪಡೆದಿದ್ದಾರೆ.



ಆನ್ ಲೈನ್ ಗೇಮಿಂಗ್ ಆ್ಯಪ್ ಕಂಪನಿಗಳಿಗೆ ಆಕ್ರಮವಾಗಿ ಹಣ ವರ್ಗಾವಣೆ ಮಾಡಿದ ಆರೋಪ ವೀರೇಂದ್ರ ಪಪ್ಪಿ ಮೇಲಿದ್ದು ಈ ಸಂಬಂಧ ಗೋವಾದಲ್ಲಿ ಪಪ್ಪಿ ವಿರುದ್ಧ ಎರಡು ಎಫ್ ಐ ಆ ರ್ ದಾಖಲಾಗಿವೆ. ಅಕ್ರಮ ಹಣ ವರ್ಗಾವಣೆ ಆರೋಪದ ಹಿನ್ನೆಲಯಲ್ಲಿ ಇಡಿ ಅಧಿಕಾರಿಗಳು ಇಸಿಐಆರ್ ದಾಖಲಿಸಿಕೊಂಡು ದಾಳಿ ನಡೆಸಿ ದಾಖಲೆ ಪತ್ರಗಳ ಶೋಧ ಕಾರ್ಯಾಚರಣೆ ನಡೆಸುತ್ತಿದ್ದಾರೆ. ವೀರೇಂದ್ರ ಅವರು ಕಿಂಗ್ 567, ರಾಜ 567, ಪಪ್ಪೀಸ್ 003, ರತ್ನ ಗೇಮಿಂಗ್ ಮುಂತಾದ ಆನ್‌ಲೈನ್ ಬೆಟ್ಟಿಂಗ್ ಸೈಟ್‌ಗಳನ್ನು ನಡೆಸುತ್ತಿದ್ದಾರೆ ಎಂದು ಆರೋಪಿಸಲಾಗಿದೆ. ಅವರ ಸಹೋದರ ಕೆಸಿ ತಿಪ್ಪೇಸ್ವಾಮಿ ದುಬೈನಿಂದ ಡೈಮಂಡ್ ಸಾಫ್ಟೆಕ್, ಟಿಆರ್‌ಎಸ್ ಟೆಕ್ನಾಲಜೀಸ್ ಮತ್ತು ಪ್ರೈಮ್ 9 ಟೆಕ್ನಾಲಜೀಸ್ ಎಂಬ ಮೂರು ವ್ಯವಹಾರ ಸಂಸ್ಥೆಗಳನ್ನು ನಿರ್ವಹಿಸುತ್ತಿದ್ದಾರೆ ಎಂದು ಆರೋಪಿಸಲಾಗಿದೆ.

ಈ ಸಂಸ್ಥೆಗಳು ಕಾಲ್ ಸೆಂಟರ್ ಸೇವೆಗಳು ಮತ್ತು ವೀರೇಂದ್ರ ಅವರ ಗೇಮಿಂಗ್ ವ್ಯವಹಾರಕ್ಕೆ ಸಂಬಂಧಪಟ್ಟಿವೆ. ಏಜೆನ್ಸಿ ಮೂಲಗಳ ಪ್ರಕಾರ, ಬೆಂಗಳೂರಿನಲ್ಲಿರುವ ಕಾಂಗ್ರೆಸ್ ನಾಯಕಿ ಕುಸುಮಾ ಅವರ ಸಹೋದರ ಅನಿಲ್ ಗೌಡ ಎಂಬ ವ್ಯಕ್ತಿಯ ಸ್ಥಳವನ್ನೂ ಸಹ ಶೋಧಿಸಲಾಗಿದೆ.

**2016ರಲ್ಲಿಯೂ ದಾಳಿ:** 20ಕ್ಕೂ ಹೆಚ್ಚು ವಾಹನದಲ್ಲಿ ಬಂದಿರುವ 40ಕ್ಕೂ ಹೆಚ್ಚು ಇಡಿ ಅಧಿಕಾರಿಗಳು ಮನೆಗಳಲ್ಲಿ ಪರಿಶೀಲನೆ ನಡೆಸುತ್ತಿದ್ದಾರೆ. ಈ ಹಿಂದೆ ಅಂದರೆ 2016ರ ಡಿಸೆಂಬರ್ 11 ರಂದು ಕೆಸಿ ವೀರೇಂದ್ರ ಮನೆ ಮೇಲೆ ಐಟಿ ದಾಳಿ ನಡೆದಿತ್ತು. ವಿರೇಂದ್ರ ಮನೆಯ ಬಾತ್ ರೂಂನಲ್ಲಿ 5 ಕೋಟಿ ರೂಪಾಯಿಗೂ ಹೆಚ್ಚು ಹಣ, 30 ಕೆಜಿಗೂ ಹೆಚ್ಚು ಚಿನ್ನ ಪತ್ತೆ ಆಗಿತ್ತು.

# ಹೊಸಪೇಟೆ: ಬಾಲ್ಯ ವಿವಾಹ ತಡೆಯಲು ಯತ್ನ

ಹೊಸಪೇಟೆ: ವಿಜಯನಗರ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಟಾಪರ್ ಆಗಿರುವ ವಿಜಯನಗರದ ಒಬ್ಬ ವಿದ್ಯಾರ್ಥಿನಿ ತನ್ನ ವಯಸ್ಸಿಗೆ ಮೀರಿದ ಪ್ರಬುದ್ಧತೆಯನ್ನು ತೋರಿಸಿದ್ದಾಳೆ. ಪೋಷಕರು ಏರ್ಪಡಿಸಿದ ಬಾಲ್ಯ ವಿವಾಹ ಪ್ರಸ್ತಾವನೆಯನ್ನು ನಿರಾಕರಿಸುವ ಮೂಲಕ ಮಾದರಿಯಾಗಿದ್ದಾಳೆ.

ಪೋಷಕರು ಮದುವೆಯಾಗುವಂತೆ ಒತ್ತಡ ಹೇರಿದಾಗ, ಹೂವಿನ ಹಡಗಲಿಯಲ್ಲಿ ವಾಸಿಸುವ ಬಾಲಕಿ ಮಕ್ಕಳ ಸಹಾಯವಾಣಿ 1098 ಗೆ ಕರೆ ಮಾಡಿದ್ದಳು. ಇತ್ತೀಚೆಗೆ ಆಕೆ ತನ್ನ ಶಾಲೆಯಲ್ಲಿ ಮಕ್ಕಳ ಹಕ್ಕುಗಳ ಕುರಿತ ಜಾಗೃತಿ ಕಾರ್ಯಕ್ರಮಕ್ಕೆ ಹಾಜರಾಗಿದ್ದಳು ಹಾಗೂ ಮಕ್ಕಳ ಸಹಾಯವಾಣಿಯ ಬಗ್ಗೆ ತಿಳಿದುಕೊಂಡಳು.

ಬಾಲಕಿಯ ಕರೆಗೆ ತ್ವರಿತವಾಗಿ ಪ್ರತಿಕ್ರಿಯಿಸಿದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಸ್ಥಳೀಯ ಪೊಲೀಸರೊಂದಿಗೆ ಆಕೆಯ ಮನೆಗೆ ಭೇಟಿ ನೀಡಿದರು. ಅವರು ಮಧ್ಯಪ್ರವೇಶಿಸಿ, ಪೋಷಕರಿಗೆ ಸಲಹೆ ನೀಡಿ ಮದುವೆಯನ್ನು ತಕ್ಷಣವೇ ರದ್ದುಗೊಳಿಸುವಂತೆ ನೋಡಿಕೊಂಡರು.

ಅಂತಹ ಯಾವುದೇ ಪ್ರಯತ್ನವನ್ನು ಪುನರಾವರ್ತಿಸದಂತೆ ಪೊಲೀಸರು ಪೋಷಕರಿಗೆ ಎಚ್ಚರಿಕೆ ನೀಡಿ, ಅವರ ವಿರುದ್ಧ ಎಫ್‌ಐಆರ್ ದಾಖಲಿಸಿದರು. ವಿಜಯನಗರ ಜಿಲ್ಲಾಡಳಿತ ಮತ್ತು ಪೊಲೀಸರು ಬಾಲ್ಯ ವಿವಾಹ ತಡೆಗಟ್ಟುವಿಕೆಯ ಕುರಿತು ನಿಯಮಿತವಾಗಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿದೆ. ಕಳೆದ ಎರಡು ವರ್ಷಗಳಲ್ಲಿ ಜಿಲ್ಲೆಯಲ್ಲಿ ಬಾಲ್ಯ ವಿವಾಹಗಳ ಸಂಖ್ಯೆ ಕಡಿಮೆಯಾಗಿದೆ ಎಂದು ವಿಜಯನಗರದ ಉಪ ಆಯುಕ್ತ (ಡಿಸಿ) ಎಂ.ಎಸ್. ದಿವಾಕರ್ ದಿ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್ ಗೆ ತಿಳಿಸಿದರು.

ನಾವು ಹೈಯರ್ ಸೆಕೆಂಡರಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ, ವಿಶೇಷವಾಗಿ ಹುಡುಗಿಯರಿಗೆ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿದ್ದೇವೆ. ಬಾಲ್ಯವಿವಾಹಗಳ ಬಗ್ಗೆ ಆಶಾ ಮತ್ತು ಅಂಗನವಾಡಿ ಸಿಬ್ಬಂದಿಗೆ ನಿಗಾ ಇಡಲು ತಿಳಿಸಲಾಗಿದೆ" ಎಂದು ಡಿಸಿ ಹೇಳಿದರು.

# HMT ಕಾರ್ಯಾಚರಣೆ ಬಲಪಡಿಸಲು ಎಚ್.ಡಿ ಕುಮಾರಸ್ವಾಮಿ ಸಭೆ



## ಪಕ್ಷದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ವಿಶೇಷ ನಿರ್ಣಯ

ನವದೆಹಲಿ: ಭಾರತದ ಪ್ರಸಿದ್ಧ ವಾಚ್ ಬ್ರ್ಯಾಂಡ್ ಆದ HMT ವಾಚ್‌ಗಳ ಸದ್ಯದ ಕಾರ್ಯಾಚರಣೆ ಮತ್ತು ಅದರ ಭವಿಷ್ಯದ ಯೋಜನೆಗಳ ಕುರಿತು ಚರ್ಚಿಸಲು ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಶುಕ್ರವಾರ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲಿ, HMT ಬ್ರ್ಯಾಂಡ್‌ನ ಪರಂಪರೆಯನ್ನು ರಕ್ಷಿಸುವ ಮತ್ತು ಮುಂದುವರಿಸುವ ಸಲುವಾಗಿ ಕಂಪನಿಯ ಕಾರ್ಯಾಚರಣೆಗಳನ್ನು ಸುಧಾರಿಸುವ ಬಗ್ಗೆ ಗಮನ ಹರಿಸಲಾಯಿತು.

ಕೇಂದ್ರ ಸಾರ್ವಜನಿಕ ವಲಯದ ಉದ್ಯಮವಾದ ಎಚ್‌ಎಂಟಿ ಲಿಮಿಟೆಡ್, ಬೃಹತ್ ಕೈಗಾರಿಕೆಗಳ ಸಚಿವಾಲಯದ ನಿಯಂತ್ರಣದಲ್ಲಿದೆ. ಇದು ಎರಡು ಉತ್ಪಾದನಾ ಘಟಕಗಳನ್ನು ಹೊಂದಿದೆ. ಔರಂಗಾಬಾದ್‌ನಲ್ಲಿ ಆಹಾರ ಸಂಸ್ಕರಣಾ ಯಂತ್ರೋಪಕರಣಗಳ ಘಟಕ ಮತ್ತು ಬೆಂಗಳೂರಿನಲ್ಲಿ ಸಹಾಯಕ ವ್ಯವಹಾರ ಘಟಕವನ್ನು ಹೊಂದಿದೆ.

ಆಹಾರ ಸಂಸ್ಕರಣಾ ಯಂತ್ರೋಪಕರಣಗಳ ಘಟಕವು ಹಾಲು ಸಂಸ್ಕರಣೆ ಮತ್ತು ಇತರ ಆಹಾರ ಸಂಸ್ಕರಣೆಗಳಿಗಾಗಿ ವಿವಿಧ ಯಂತ್ರೋಪಕರಣಗಳನ್ನು ತಯಾರಿಸುತ್ತದೆ. ಇದು ಹಾಲು ಸಂಸ್ಕರಣಾ ಕೈಗಾರಿಕೆಗಳಿಗೆ ಟರ್ನ್-ಕೀ ಯೋಜನೆಗಳನ್ನು ಸಹ ಕೈಗೆತ್ತಿಕೊಳ್ಳುತ್ತದೆ.

HMT ಕೈಗಡಿಯಾರಗಳ ಪರಂಪರೆಯನ್ನು ಜೀವಂತವಾಗಿಡಲು ಮತ್ತು ಬ್ರ್ಯಾಂಡ್ ಇಕ್ವಿಟಿಯನ್ನು ನಗದೀಕರಿಸಲು ಸಹಾಯಕ ವ್ಯವಹಾರ ಘಟಕವು ಕೈಗಡಿಯಾರಗಳು ಮತ್ತು ಗಡಿಯಾರಗಳ ಜೋಡಣೆ ಮತ್ತು ಮಾರಾಟವನ್ನು ನೋಡಿಕೊಳ್ಳುತ್ತದೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, 'HMT ಕೈಗಡಿಯಾರಗಳ ಕಾರ್ಯಕ್ಷಮತೆ ಮತ್ತು ಭವಿಷ್ಯದ ಮಾರ್ಗಸೂಚಿಯ ಕುರಿತು ಪರಿಶೀಲನಾ ಸಭೆಯನ್ನು ನಡೆಸಲಾಗಿದೆ. ಕಾರ್ಯಾಚರಣೆಗಳನ್ನು ಬಲಪಡಿಸುವುದು ಮತ್ತು ಬ್ರ್ಯಾಂಡ್‌ನ ಪರಂಪರೆಯನ್ನು ಸಂರಕ್ಷಿಸುವ ಬಗ್ಗೆ ಚರ್ಚೆಗಳು ನಡೆದಿವೆ. ಬೃಹತ್ ಕೈಗಾರಿಕೆಗಳ ಸಚಿವಾಲಯದ ಕಾರ್ಯದರ್ಶಿ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು' ಎಂದು ಬರೆದಿದ್ದಾರೆ.

# ನಿರೂಪಕಿ ಅನುಶ್ರೀ ಮದುವೆ ಆ.28ಕ್ಕೆ

ಕನ್ನಡದ ಹೆಸರಾಂತ ನಿರೂಪಕಿ, ನಟಿ ಅನುಶ್ರೀ ಅವರು ಕೊಡಗು ಮೂಲದ ರೋಷನ್ ಜೊತೆ ಆ.28 ರಂದು ಮದುವೆಯಾಗುತ್ತಿದ್ದು, ಬೆಂಗಳೂರಿನ ಹೊರವಲಯದ ರೆಸಾರ್ಟ್‌ನಲ್ಲಿ ಮದುವೆ ಕಾರ್ಯಕ್ರಮ ನಡೆಯಲಿದೆ. ರಾಮಮೂರ್ತಿ ಅವರ ಪುತ್ರ ರೋಷನ್ ಅವರನ್ನು ಅಂದು ಬೆಳಗ್ಗೆ 10:56ಕ್ಕೆ ಅನುಶ್ರಿ ವಿವಾಹವಾಗಲಿದ್ದಾರೆ.

" ನೀವೆಲ್ಲ ಕೇಳುತ್ತಿದ್ದ ಏಕೈಕ ಪ್ರಶ್ನೆಗೆ ಈಗ ಉತ್ತರ. ಏಕಾಂಗಿ ನಿರೂಪಣೆಯ ನಂತರ ಅರ್ಧಾಂಗಿ ಆಗುವ ಹೊಸ ಮನ್ವಂತರ" ಎಂದು ಅನುಶ್ರೀ ಆಮಂತ್ರಣ ಪತ್ರಿಕೆಯಲ್ಲಿ ಬರೆಯಿಸಿದ್ದಾರೆ. ಅನುಶ್ರೀಯ ಮದುವೆಗೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣಗಳು, ಸಭೆ ಸಮಾರಂಭಗಳಲ್ಲಿ ಯಾವಾಗ, ಹುಡುಗ ಯಾರು ಇವೇ ಪ್ರಶ್ನೆಗಳು ಎದುರಾಗುತ್ತಿದ್ದವು. ಕೆಲವೊಂದು ಜಾಲತಾಣಗಳಲ್ಲಿ ಅವರು ಮದುವೆಯಾದರೆಂಬ ಸುದ್ದಿಗಳು ಕೂಡ ಸಾಕಷ್ಟು ಬಾರಿ ಹರಿದಾಡಿವೆ. ಈಗ ಕೊನೆಗೂ ಅನುಶ್ರೀ ಮದುವೆಯಾಗುತ್ತಿರುರುವ ಮೂಲಕ ಅಭಿಮಾನಿಗಳ ಪ್ರಶ್ನೆಗೆ ಉತ್ತರ ನೀಡುತ್ತಿದ್ದಾರೆ.

ಅನುಶ್ರೀ ಮದುವೆಯಾಗುತ್ತಿರುವ ರೋಷನ್ ಹಿಂದೂ ಹುಡುಗ ಅಲ್ಲ ಎಂದು ಸಾಮಾಜಿಕ ಮಾಧ್ಯಮ ಕೀಳು ಅಭಿರುಚಿಯ ಸುದ್ದಿ ಹರಡಿದ್ದು, ಇದನ್ನು ನೋಡಿದವರು, ಆತನನ್ನು ಯಾಕೆ ಮದುವೆಯಾಗುತ್ತಿದ್ದೀರಿ, ಬೇರೆ ಯಾರೂ ಹಿಂದೂ ಹುಡುಗ ಸಿಗಲಿಲ್ಲವೇ ಎಂದು ಪ್ರಶ್ನಿಸಿದ್ದಲ್ಲದೆ ಆಕ್ರೋಶ ವ್ಯಕ್ತಪಡಿಸಿದ್ದರು.



# ಪೊಲೀಸ್ ಆಯುಕ್ತರ ಮನವಿ ಮೇರೆಗೆ ಚಿನ್ನಸ್ವಾಮಿ ಕ್ರೀಡಾಂಗಣದ ಕಾರ್ಯಕ್ರಮಕ್ಕೆ ಹೋದೆ: ಡಿಕೆ

"ಪೊಲೀಸ್ ಆಯುಕ್ತರು ನನ್ನ ಬಳಿ ಬಂದು ಆರ್ ಸಿಬಿ ತಂಡದವರಿಗೆ 10 ನಿಮಿಷಗಳಲ್ಲಿ ಕಾರ್ಯಕ್ರಮ ಮುಗಿಸುವಂತೆ ಸೂಚನೆ ನೀಡಿ ಎಂದು ಮನವಿ ಮಾಡಿಕೊಂಡ ಕಾರಣಕ್ಕೆ ನಾನು ಆ ಕಾರ್ಯಕ್ರಮಕ್ಕೆ ಹೋಗಿ 10 ನಿಮಿಷಗಳಲ್ಲಿ ಕಾರ್ಯಕ್ರಮ ಮುಗಿಸುವಂತೆ ಸೂಚನೆ ನೀಡಿದೆ" ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದರು.

ವಿಧಾನಸಭೆಯಲ್ಲಿ ಆರ್ ಸಿಬಿ ಸಂಭ್ರಮಾಚರಣೆ ವೇಳೆ ನಡೆದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳು ಉತ್ತರ ನೀಡುವ ವೇಳೆ ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ್ ಅವರು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿನ ಕಾರ್ಯಕ್ರಮಕ್ಕೆ ಸರ್ಕಾರ ಅನುಮತಿ ನೀಡಿಲ್ಲವಾದರೆ ಉಪಮುಖ್ಯಮಂತ್ರಿಗಳು ಹೋಗಿದ್ದು ಯಾಕೆ ಎಂದು ಪ್ರಶ್ನೆ ಮಾಡಿದರು. ಇದಕ್ಕೆ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಸ್ಪಷ್ಟನೆ ನೀಡಿದರು.

"ನನ್ನನ್ನು ಪದೇ ಪದೆ ನೆನೆಯದಿದ್ದರೆ ನಿಮಗೆ ಸಮಾಧಾನ ಆಗುವುದಿಲ್ಲ. ನಿಮ್ಮ ಪಕ್ಷದವರಿಗೆ ಖುಷಿ ಪಡಿಸಲೂ ಆಗುವುದಿಲ್ಲ. ನಿಮಗೆ ಖುಷಿ ಆಗುವಂತೆ ಉತ್ತರ ಕೊಡಲೂ ಆಗುವುದಿಲ್ಲ ಎಂದು ಛೇಡಿಸಿದರು.

"ಅಂದು ವಿಧಾನಸೌಧದ ಎದುರು ನಡೆದ ಸರ್ಕಾರಿ ಕಾರ್ಯಕ್ರಮಕ್ಕೆ ಬಂದಿದ್ದ ಕೆಎಸ್ ಸಿಎ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಕ್ರೀಡಾಂಗಣಕ್ಕೆ ಹೋಗಲು ಸಾಧ್ಯವಾಗದೇ ಹತಾಶರಾಗಿದ್ದರು. ಇನ್ನು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ಕೇವಲ 10 ನಿಮಿಷಗಳಲ್ಲಿ ಮುಗಿಸುವಂತೆ ನೀವೇ ಬಂದು ವ್ಯವಸ್ಥೆ ಮಾಡಬೇಕು ಎಂದು ಪೊಲೀಸ್ ಆಯುಕ್ತರು ನನ್ನ ಬಳಿ ಮನವಿ ಮಾಡಿದರು. ನಾನು ಕಾರ್ಯಕ್ರಮಕ್ಕೆ ಹೋಗಿದ್ದೂ ನಿಜ, ಅಲ್ಲಿ ಇದ್ದಿದ್ದೂ ನಿಜ, ಆರ್ ಸಿಬಿ ಆಟಗಾರರಿಗೆ ಅಭಿನಂದನೆ ಸಲ್ಲಿಸಿದ್ದು ನಿಜ. 10 ನಿಮಿಷಗಳಲ್ಲಿ ಈ ಕಾರ್ಯಕ್ರಮ ಮುಗಿಸುವಂತೆ ಅವರಿಗೆ ಸೂಚನೆ ಕೊಟ್ಟಿದ್ದೂ ನಿಜ.

ಇದೇ ಮಾತನ್ನು ನಾನು ಕುನ್ಹಾ ಅವರ ತನಿಖಾ ತಂಡದ ಮುಂದೆ ಹೇಳಿಕೆ ನೀಡಿದ್ದೂ ನಿಜ. ನಾನು ಅಲ್ಲಿಗೆ ಹೋಗಿಲ್ಲ ಎಂದು ಹೇಳುತ್ತಿಲ್ಲ. ಅಲ್ಲಿಗೆ ಹೋಗಲು ನಿಮ್ಮ ಅನುಮತಿಯ ಅಗತ್ಯವೂ ನನಗಿಲ್ಲ. ಪೊಲೀಸರ ಮನವಿ ಮೇಲೆ ನನ್ನ ಜವಾಬ್ದಾರಿಯಿಂದ ನಾನು ಹೋಗಿ ಅವರಿಗೆ ಸೂಚನೆ ನೀಡಿದ್ದೇನೆ. ಕಪ್ ಗೆ ಮುತ್ತು ನೀಡಿದ್ದೇನೆ, ಆಟಗಾರರಿಗೆ ಅಭಿನಂದಿಸಿದ್ದೇನೆ" ಎಂದರು.

# ಮೈಸೂರು ದಸರಾ ಉದ್ಘಾಟನೆಗೆ ಸೋನಿಯಾ ಗಾಂಧಿ: ಕಾಲ್ಪನಿಕ ಸುದ್ದಿ ಎಂದ ಸಿಎಂ ಕಚೇರಿ

ಈ ಬಾರಿಯ ಮೈಸೂರು ದಸರಾ ಉದ್ಘಾಟನೆಗೆ ಸೋನಿಯಾ ಗಾಂಧಿ ಹೆಸರು ಕೇಳಿಬರುತ್ತಿದ್ದು, ಈ ಸಂಬಂಧ ಸಾಮಾಜಿಕ ಜಾಲತಾಣಗಳಲ್ಲಿ ಪರ ವಿರೋಧದ ಚರ್ಚೆಗಳು ಆರಂಭಗೊಂಡಿವೆ. ಈ ವಿಚಾರದಲ್ಲಿ ಸಿಎಂ ಕಚೇರಿ ಸ್ಪಷ್ಟನೆ ನೀಡಿದೆ.

ಈ ಬಾರಿಯ ದಸರಾ ಮಹೋತ್ಸವವನ್ನು ಕಾಂಗ್ರೆಸ್ ಪಕ್ಷದ ವರಿಷ್ಠರಾದ ಸೋನಿಯಾಂಧಿಯವರು ಉದ್ಘಾಟಿಸಲಿದ್ದಾರೆ ಎಂಬ ಕಾಲ್ಪನಿಕ ಸುದ್ದಿಯನ್ನು ಕೆಲವು ಮಾಧ್ಯಮಗಳು ವರದಿ ಮಾಡಿವೆ. ಇದು ಸತ್ಯಕ್ಕೆ ದೂರವಾದದ್ದು. ಆ ರೀತಿಯ ಉದ್ದೇಶವಾಗಲೀ, ಪ್ರಸ್ತಾವನೆಯಾಗಲಿ ಸರ್ಕಾರದ ಮುಂದೆ ಇಲ್ಲ ಎಂದು ಸಿಎಂ ಕಚೇರಿ ಹೇಳಿದೆ.

ದಸರಾವನ್ನು ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ ಅವರಿಂದ ಉದ್ಘಾಟಿಸಲು ಸಿಎಂ ಸಿದ್ದರಾಮಯ್ಯ ಇಚ್ಛಿಸಿದ್ದಾರೆ. ಈ ಬಗ್ಗೆ ಸಿದ್ದರಾಮಯ್ಯ ಅವರು ಸೋನಿಯಾ ಗಾಂಧಿಗೆ ಪತ್ರ ಬರೆದಿದ್ದಾರೆ. ಪತ್ರಕ್ಕೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಹೀಗಾಗಿ ಖುದ್ದು ಸಿಎಂ ದೆಹಲಿಗೆ ತೆರಳಿ ಸೋನಿಯಾ ಅವರನ್ನು ಭೇಟಿ ಮಾಡಿ ಆಹ್ವಾನ ನೀಡುವ ಸಾಧ್ಯತೆಗಳಿವೆ ಎಂದು ಸುದ್ದಿಯಾಗಿತ್ತು. ಸೋನಿಯಾ ಗಾಂಧಿ ಉದ್ಘಾಟಿಸಲು ಅವರಿಗೇನು ಅರ್ಹತೆ ಇದೆ, ಮೈಸೂರು ದಸರಾಕ್ಕೂ ಅವರಿಗೂ ಏನು ಸಂಬಂಧ ಎಂಬ ಪ್ರಶ್ನೆಗಳು ಕೇಳಿ ಬಂದಿವೆ. ಸಿಎಂ ಕಚೇರಿಯೇ ಸ್ಪಷ್ಟನೆ ನೀಡಿ ಊಹಾಪೋಹಗಳಿಗೆ ತೆರೆ ಎಳೆದಿದೆ. ದಸರಾ ಹಬ್ಬವನ್ನು ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸುವ ಮೂಲಕ ಉದ್ಘಾಟಿಸಲಾಗುತ್ತದೆ.

ಕಲೆ ,ಸಾಹಿತ್ಯ ಮತ್ತು ಕಲಾವಿದರು ಹಾಗೂ ರಾಷ್ಟಪತಿಗಳು ಸೇರಿಂದತೆ ಅನೇಕ ಗಣ್ಯರು ಉದ್ಘಾಟನೆ ಮಾಡಿದ್ದಾರೆ. 2021 ರಲ್ಲಿ ಮುಖ್ಯಮಂತ್ರಿಯಾಗಿದ್ದ ಬಸವರಾಜು ಬೊಮ್ಮಾಯಿ ರಾಜ್ಯದ ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರಿಗೆ ದಸರಾ ಉದ್ಘಾಟನೆಗೆ ಆಹ್ವಾನವನ್ನು ನೀಡಿದ್ದರು. ಇದರೊಂದಿಗೆ ರಾಜಕೀಯ ಕ್ಷೇತ್ರದಿಂದ ಗಣ್ಯರು ಒಬ್ಬರು ಪ್ರಥಮ ಬಾರಿಗೆ ಮೈಸೂರು ದಸರಾವನ್ನು ಉದ್ಘಾಟಿಸಿದ್ದರು.

ದಸರಾ ಸಂಬಂಧ ಸಿಎಂ ಸಿದ್ದರಾಮಯ್ಯ ಸಭೆ ಮಾಡಿ ಒಂದು ಸಮಿತಿಯನ್ನು ಮಾಡಿ ಒಂದಷ್ಟು ಅನುದಾನ ಕೊಡುತ್ತಾರೆ.ಹೇಗೆಲ್ಲಾ ಕಾರ್ಯಕ್ರಮ ರೂಪಿಸಬೇಕೆಂದು ಸಮಿತಿ ಸಭೆ ಮಾಡಿ ತೀರ್ಮಾನ ಕೈಗೊಳ್ಳುತ್ತೆ. ದಸರಾ ಉದ್ಘಾಟಕರ ಆಯ್ಕೆ ಮಾಡುವುದು ರಾಜ್ಯದ ಮುಖ್ಯಮಂತ್ರಿಗಳಿಗೆ ಬಿಟ್ಟ ವಿಚಾರವಾಗಿದೆ. ಸೆಪ್ಟಂಬರ್ 22 ರಿಂದ ಅಕ್ಟೋಬರ್ 2ರವರೆಗೆ ದಸರಾ ನಡೆಯಲಿದ್ದು, ಈಗಾಗಲೇ ಮೈಸೂರಿನಲ್ಲಿ ಸಿದ್ಧತೆಗಳು ಬಿರುಸಿನಿಂದ ಸಾಗಿದೆ. ಈ ಬಾರಿ ಮೈಸೂರು ದಸರಾವನ್ನು ಯಾರು ಉದ್ಘಾಟನೆ ಮಾಡುತ್ತಾರೆ ಎನ್ನುವುದು ಇನ್ನಷ್ಟೇ ತಿಳಿಯಬೇಕಿದೆ.

# ರಮ್ಯಾಗೆ ಅಶ್ಲೀಲ ಸಂದೇಶ: ಬಂಧಿತರ ಸಂಖ್ಯೆ 9ಕ್ಕೆ ಏರಿಕೆ



ಬೆಂಗಳೂರು: ಸ್ಯಾಂಡಲ್‌ವುಡ್ ನಟಿ ರಮ್ಯಾಗೆ ಅಶ್ಲೀಲ ಸಂದೇಶ ಕಳುಹಿಸಿದ್ದ ಪ್ರಕರಣದ ಸಂಬಂಧ ಸಿಸಿಬಿ ಪೊಲೀಸರು ಮತ್ತೆ ಇಬ್ಬರನ್ನು ಬಂಧಿಸಿದ್ದು, ಇಲ್ಲಿಯವರೆಗೂ ಬಂಧಿತರ ಸಂಖ್ಯೆ 9ಕ್ಕೇ ಏರಿಕೆಯಾಗಿದೆ. ಉಡುಪಿ ಮೂಲದಸುಜನ್ ಮತ್ತು ಆದರ್ಶ್ ಬಂಧಿತ ಯುವಕರು. ಇದಕ್ಕೂ ಮುನ್ನ ಸಿಸಿಬಿ ಪೊಲೀಸರು ಮಂಜುನಾಥ, ಭುವನ್ ಗೌಡ, ಪವನ್, ಓಬಣ್ಣ ಮತ್ತು ಗಂಗಾಧರ್ ಸೇರಿ ಒಟ್ಟು 9 ಯುವಕರನ್ನು ಬಂಧಿಸಿದ್ದರು.

ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ರೇಣುಕಾಸ್ವಾಮಿ ಕುಟುಂಬದ ಪರವಾಗಿ ನಿಂತ ಕಾರಣಕ್ಕೆ ನಟಿ ರಮ್ಯಾಗೆ ದರ್ಶನ್ ಅಭಿಮಾನಿಗಳು ಅಶ್ಲೀಲ ಮೆಸೇಜ್ ಕಳುಹಿಸಿದ್ದರು. ಇದರ ಬೆನ್ನಲ್ಲೇ ದರ್ಶನ್ ಫ್ಯಾನ್ಸ್ ವಿರುದ್ಧ ಗರಂ ಆದ ನಟಿ ಅಶ್ಲೀಲ ಮೆಸೇಜ್ ಕಳುಹಿಸಿದ್ದವರ ಖಾತೆಗಳನ್ನು ಬಹಿರಂಗಗೊಳಿಸಿದ್ದರು. ಜೊತೆಗೆ 43 ಅಕೌಂಟ್‌ಗಳ ವಿರುದ್ಧ ದೂರು ದಾಖಲಿಸಿದ್ದರು. ಇದರ ಬೆನ್ನಲ್ಲೇ ಕಿಡಿಗೇಡಿಗಳ ಪತ್ತೆಗಾಗಿ 6 ತಂಡವನ್ನ ರಚನೆ ಮಾಡಲಾಗಿತ್ತು.

ಕೊಲೆಯಾದ ಚಿತ್ರದುರ್ಗದ ರೇಣುಕಾಸ್ವಾಮಿಗೆ ನ್ಯಾಯ ಸಿಗುವ ಬಗ್ಗೆ ರಮ್ಯಾ ಪೋಸ್ಟ್ ಹಾಕಿದ್ದಕ್ಕೆ ಅಶ್ಲೀಲ ಕಾಮೆಂಟ್ ಮಾಡಿರುವುದು ಪೊಲೀಸರ ವಿಚಾರಣೆಯಲ್ಲಿ ಬೆಳಕಿಗೆ ಬಂದಿದೆ. ಬೆಂಗಳೂರು ಸೇರಿದಂತೆ ಹಲವು ಕಡೆ ಕಿಡಿಗೇಡಿಗಳಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ. ಈವರೆಗೂ ಸಿಸಿಬಿ ಪೊಲೀಸರು ಒಟ್ಟು 9 ಮಂದಿಯನ್ನು ಬಂಧಿಸಿ ವಿಚಾರಣೆ ಕೈಗೊಂಡಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.